# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

### ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1872 (2163)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳಲ್ಲಿ ಸುಧಾರಣಾ ಕ್ರಮಗಳ ಬಗ್ಗೆ

(ಅ) ಭಾರತದ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಕೇಂದ್ರ ಸರ್ಕಾರದ ಗೃಹ ಸಚಿವಾಲಯವು ಪೊಲೀಸ್ ಇಲಾಖೆ ಏಳು ಸುಧಾರಣೆಗಳನ್ನು ಜಾರಿಗೆ ತರುವಂತೆ ಸೂಚನೆ ನೀಡಿರುವುದು ನಿಜವೇ; ಹಾಗಿದ್ದಲ್ಲಿ, ಈ ಸುಧಾರಣೆಗಳ ವಿವರ ಮತ್ತು ಕೈಗೊಂಡ ಕ್ರಮಗಳ ಬಗ್ಗೆ ವಿವರ ನೀಡುವುದು;

(ಆ) ಈ ಸುಧಾರಣೆಗಳನ್ನು ಕಾರ್ಯರೂಪಕ್ಕೆ ತರಲು ಕೇಂದ್ರ ಸರ್ಕಾರ ತಹಲ್‌ವರೆಗೂ ನೀಡಿರುವ ಆರ್ಥಿಕ ನೆರವಿನೊಂದಿಗೆ ಇತರೆ ಸವಲತ್ತುಗಳು ಯಾವುವು; (ವಿವರ ನೀಡುವುದು)

(ಇ) ಈ ಸುಧಾರಣೆಗಳ ಆಚರಣೆಯಿಂದ ಪೊಲೀಸ್ ಸಿಬ್ಬಂದಿಗಳಲ್ಲಿ /ಅಧಿಕಾರಿಗಳಲ್ಲಿ ನಿರೀಕ್ಷಿಸಿದ ಪ್ರಮಾಣದಲ್ಲಿನ ನಡುವಳಿಕೆಯಲ್ಲಿ ಸುಧಾರಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ರಾಜ್ಯ ಸರ್ಕಾರವಾಗಲೀ ಅಥವಾ ಕೇಂದ್ರ ಸರ್ಕಾರವಾಗಲೀ ಅಧ್ಯಯನ/ಸಮೀಕ್ಷೆ ನಡೆಸಿದೆಯೇ; (ವಿವರ ನೀಡುವುದು)

(ಈ) ಪೊಲೀಸ್ ಇಲಾಖೆಯಲ್ಲಿ ಈ ಸುಧಾರಣೆಗಳು ಅತ್ಯಗತ್ಯವಾಗಿ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಸಿಬ್ಬಂದಿಗಳು/ ಅಧಿಕಾರಿಗಳಲ್ಲಿ ಅಳವಡಿಕೆಯಾಗ -ಬೇಕಾಗಿದ್ದು, ರಾಜ್ಯ ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮವೇನು;

(ಉ) ಇತ್ತೀಚಿನ ದಿನಗಳಲ್ಲಿ ಶಾಸಕರ ಭವನದಲ್ಲಿ ಅತೀ ಹೆಚ್ಚು ಸಂದರ್ಶಕರು ಮತ್ತು ವಾಹನಗಳ ದಟ್ಟಣೆ ಹೆಚ್ಚಾಗಿದ್ದು, ಶಾಸಕರ ಭವನಕ್ಕೆ ಪ್ರತ್ಯೇಕ ಪೊಲೀಸ್ ಠಾಣೆ ತೆರೆಯಲು ರಾಜ್ಯ ಸರ್ಕಾರ ಯೋಚಿಸಿದೆಯೇ? (ವಿವರ ನೀಡುವುದು)